ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ		14 (39)
ಸದಸ್ಯರ ಹೆಸರು		ಶ್ರೀ ಎಸ್ . ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ		13.12.2021
ಉತ್ತರಿಸಬೇಕಾದವರು		ಉನ್ನತ ಶಿಕ್ಷಣ ಸಚಿವರು
ಪ್ರಶ್ನೆ		ಉತ್ತರ
(ಅ)	ರಾಜ್ಯದಲ್ಲಿರುವ ಪದವಿ ಕಾಲೇಜುಗಳಲ್ಲಿ ಹಲವಾರು ವರ್ಷಗಳಿಂದ ಸೇವೆ ಸಲ್ಲಿಸಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು?	ಪ್ರಸ್ತುತ, 2021-22ನೇ ಸಾಲಿನಲ್ಲಿ ಸೇವೆ ಸಲ್ಲಿಸಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಒಟ್ಟು **14,183.**
(ಆ)	ನಿಗಧಿತ ವಿದ್ಯಾರ್ಹತೆಯಾದ KSET, NET, Ph.D., ಪಡೆದಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು; (ವಿವರ ನೀಡುವುದು)	KSET, NET, Ph.D., ಪಡೆದಿರುವ ಅತಿಥಿ ಉಪನ್ಯಾಸಕರ ಸಂಖ್ಯೆ : **4448**
(ಇ)	ಸದರಿ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಬೇಕೆನ್ನುವ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸುವ ಸರ್ಕಾರ ಕ್ರಮಕೈಗೊಳ್ಳುವುದೇ;	ಬಂದಿದೆ. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರತಿ ಶೈಕ್ಷಣಿಕ ವರ್ಷದಲ್ಲಿ ಕೋರ್ಸ್/ ಕಾಂಬಿನೇಷನ್ ಮತ್ತು ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಗನುಗುಣವಾಗಿ ಉದ್ಭವಿಸುವ ಬೋಧನಾ ಕಾರ್ಯಭಾರವನ್ನು ಮೊದಲು ಖಾಯಂ ಅಧ್ಯಾಪಕರಿಗೆ ಹಂಚಿಕೆ ಮಾಡಿ, ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಕಲಾ/ವಾಣಿಜ್ಯ ವಿಷಯಕ್ಕೆ ವಾರಕ್ಕೆ ಗರಿಷ್ಠ 08 ಗಂಟೆ ಹಾಗೂ ವಿಜ್ಞಾನ ವಿಷಯಗಳಿಗೆ ಗರಿಷ್ಠ 10 ಗಂಟೆಗಳಿಗೆ ಮಾತ್ರ ಆಯಾ ಶೈಕ್ಷಣಿಕ ವರ್ಷಕ್ಕೆ ಸೀಮಿತಗೊಳಿಸಿ, ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ತಾತ್ಕಾಲಿಕವಾಗಿ ಬಳಸಿಕೊಳ್ಳಲಾಗುತ್ತಿದೆ ಮತ್ತು ಆಯಾ ಶೈಕ್ಷಣಿಕ ವರ್ಷದ ಅಂತ್ಯದಲ್ಲಿ ಅತಿಥಿ ಉಪನ್ಯಾಸಕರುಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುತ್ತದೆ. ಆದ್ದರಿಂದ, ಸದರಿ ಆಯ್ಕೆಯಾದ ಅತಿಥಿ ಉಪನ್ಯಾಸಕರುಗಳನ್ನು ಯಾವುದೇ ಮಂಜೂರಾದ ಖಾಲಿ ಹುದ್ದೆಗಳ ಎದುರಾಗಿ ಕರ್ತವ್ಯ ನಿರ್ವಹಿಸುತ್ತಿರುವುದಿಲ್ಲವಾದ್ದರಿಂದ, ಅವರುಗಳ ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ, ಖಾಯಂಗೊಳಿಸಲು ಅಥವಾ ಸೇವಾ ಭದ್ರತೆ ನೀಡಲು ಪ್ರಸ್ತುತ ಜಾರಿಯಲ್ಲಿರುವ ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.
(ಈ)	ಇಲ್ಲವಾದಲ್ಲಿ, ಸದರಿ ಅತಿಥಿ ಉಪನ್ಯಾಸಕರುಗಳಿಗೆ ಸೇವಾ ಭದ್ರತೆನ್ನಾದರು ಒದಗಿಸಲು ಸರ್ಕಾರ ಮುಂದಾಗುವುದೇ;	

(ಉ)	ಅತಿಥಿ ಉಪನ್ಯಾಸಕರುಗಳ ಗೌರವಧನವನ್ನು ಹೆಚ್ಚಿಸಬೇಕೆನ್ನುವ ಬೇಡಿಕೆಯನ್ನು ಸರ್ಕಾರ ಗಮನಿಸಿದೆಯೇ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಸರ್ಕಾರದ ಆದೇಶ ಸಂಖ್ಯೆ:ಇಡಿ/66/ಡಿಸಿಇ/2017, ದಿನಾಂಕ:04.04.2017ರಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಲ್ಲಿ ಸ್ನಾತಕೋತ್ತರ ಪದವಿ ಪರೀಕ್ಷೆಯಲ್ಲಿ ಕನಿಷ್ಠ ಶೇ.55ರಷ್ಟು ಅಂಕಗಳನ್ನು ಪಡೆದಿದ್ದು, ಎನ್‌ಇಟಿ/ ಎಸ್‌ಎಲ್‌ಇಟಿ ಅಥವಾ ಪಿ.ಹೆಚ್‌ಡಿ ಪಡೆದುಕೊಂಡಿರುವ ಅತಿಥಿ ಉಪನ್ಯಾಸಕರಿಗೆ ಮಾಸಿಕ ಗೌರವಧನದ ಮೊತ್ತವನ್ನು ಮಾರ್ಚ್-2017 ರಿಂದ ಜಾರಿಗೆ ಬರುವಂತೆ ರೂ.13,000/- (ಹದಿಮೂರು ಸಾವಿರ ರೂಪಾಯಿಗಳು ಮಾತ್ರ) ಹಾಗೂ ಸ್ನಾತಕೋತ್ತರ/ ಎಂ.ಫಿಲ್ ಪದವೀಧರ ಅತಿಥಿ ಉಪನ್ಯಾಸಕರಿಗೆ ರೂ.11,000/- (ಹನ್ನೊಂದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಪಾವತಿಸಲಾಗುತ್ತಿದೆ. ಪ್ರಸ್ತುತ, ಪಾವತಿಸಲಾಗುತ್ತಿರುವ ಮಾಸಿಕ ಗೌರವಧನದ ಮೊತ್ತವನ್ನು ಪರಿಷ್ಕರಿಸಲು ರಾಜ್ಯದಲ್ಲಿ ತಲೆದೂರಿರುವ ಕೋವಿಡ್-19 ಹಿನ್ನೆಲೆಯಲ್ಲಿ ಉಂಟಾಗಿರುವ ಆರ್ಥಿಕ ಮುಗ್ಗಟ್ಟಿನ ಹಾಗೂ ಈ ಸಂಬಂಧ ಇರುವ ಆರ್ಥಿಕ ನಿರ್ಬಂಧನೆಯ ಕಾರಣ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವವರಿಗೆ ಗೌರವಧನ ಹೆಚ್ಚಿಸಲು ಸಾಧ್ಯವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.

ಇಡಿ 225 ಡಿಸಿಇ 2021

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು